ಮೈಸೂರ ಗೆಜೆಟ್.

ಸಂ. XXXVIII] ಸರಕಾರದಿಂದ ಪ್ರಕಟಿಸಲ್ಪಟ್ಟದ್ದು. [ನಂ 16.

ಬೆಂಗಳೂರು, ಗುರುವಾರ, ಏಪ್ರಿಲ್ ತಾ॥ 23, ಸನ 1903.

IIನೇ ಭಾಗ.

ಇಂಡ್ಯಗವರ್ನಮೆಂಟ, ರೆಸಿಡೆಂಟರು, ಜೀಫ್ ಜಡ್ಜೀರುವಗೈರೇರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಫಾರೆಸ್ಟ್ ಇಲಾಖೆ.

ನೋಟಿಫಿಕೇಷನ್.

ತಾರೀಖು 7ನೇ ಏಪ್ರಿಲ್ 1903.

1.—ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ—ಈ ಡಿಸ್ಟ್ರಿಕ್ಟಿನ ಈ ಕೆಳಗೆ ಕಾಣುವ ತಾಲ್ಲೂಕುಗಳಲ್ಲಿ ರುವ ಪ್ರೊಟೆಕ್ಟೆಡ್ ಫಾರೆಸ್ಟ್ಸ್ ಮತ್ತು ವಿಲ್ಲೇಜ್‌ವರ್ಕ್‌ಗಳು ಅವ್ಯತಮಹಲ್ ಕಾವಲುಗಳು ಕೇರಿಸಿಕೊಂಡು ಇತರ ಎಲ್ಲಾ ಸರ್ಕಾರಿ ಜಂಗಲ್ ಮತ್ತು ಖಾಲ್ಸಾ ಜಮೀನುಗಳಲ್ಲಿಯೂ ಸಹ ಇರತಕ್ಕ ತಂಗಡಿ ಮತ್ತು ಕಕ್ಕೆ ಚಕ್ಕೆಗಳನ್ನು 1903ನೇ ಜುಲೈ ಗಾರೆ ಲಾಗಾಯತು 1904ನೇ ಇಸವಿ ಜೂನ್ ಆಖೈರ ವರಿಗೆ ಜಪ್ತಾಯಿಸಿ ತೆಗೆದುಕೊಂಡು ಮೋಗತಕ್ಕ ಒಟ್ಟು ಸ್ವತಂತ್ರ ಹಕ್ಕನ್ನು 1903ನೇ ಇಸವಿ ಜೂನ್ ತಾರೀಖು 10ರಲ್ಲಿ ಬೆಂಗಳೂರು ಮೊಕ್ಕಾಮಿನಲ್ಲಿ ಬೆಂಗಳೂರು ಡಿಸ್ಟ್ರಿಕ್ಟು ಡೆಪ್ಯುಟಿ ಕಮಿಷನರವರ ಆಫೀಸಿನಲ್ಲಿ ಡೆಪ್ಯುಟಿ ಕಮಿಷ್ಮನರವರೊಂದಿಗೆ ಆಗಲಿ ಅಥವಾ ಅವರಿಂದ ನೇಮಕ ಮಾಡಲ್ಪಡುವ ಇತರ ಆಫಿಸರವರೊಂದಿಗೆಯಾಗಲಿ ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರವರು ತಾಲ್ಲೂಕಾವಾರ್ ಬಹಿರಂಗವಾಗಿ ಹರಾಜು ಮೂಲಕ ವಿಕ್ರಯಿಸುತ್ತಾರೆ.

1-7—1903ರ ಲಾಗಾಯತು 30—6—1904ರ ವರಿಗೆ.

1. ಹಾನಕಾನಹಳ್ಳಿ. 2. ಅನೇಕಲ್.

2. ಹರಾಜ್ ತಾರೀಖಿನ ದಿವಸ ಮಧ್ಯಾಹ್ನ 3 ಘಂಟೆಗೆ ಹರಾಜ್ ಪ್ರಾರಂಭ ಮಾಡಲ್ಪಡುವದು. ಅದೇ ದಿವಸದಲ್ಲಿ ಹರಾಜು ಹೊರೈಸದ ಪಕ್ಷಕ್ಕೆ ಮಾರನೇ ದಿವಸ ಅದೇ ಕಾಲಕ್ಕೆ ಸರಿಯಾಗಿ ಪುನಹ ಹರಾಜು ಮಾಡಲ್ಪಡುವದು.

3. ಮೇಲೆ ವಿವರಿಸಿರುವಂತೆ ತಂಗಡಿ ಮತ್ತು ಕಕ್ಕೆ ಚಕ್ಕೆ ಜವ್ವಾನಿಕೆ ಹಕ್ಕನ್ನು ಚಡದೆರಖಾಸ್ತುದಾರನಿಗೆ ವಿಲೇವಾರಿ ಮಾಡಲ್ಪಡುವದು. ಆದರೆ ಹರಾಜು ಡೆಪ್ಯುಟಿ ಕಮಿಷ್ಮನರವರ ಮಂಜೂರಾತಿಗೆ ಒಳಪಟ್ಟು ಇರುತ್ತೆ. ಯಾವ ದರಖಾಸ್ತನ್ನಾದರೂ ಯಾವ ಕಾರಣವನ್ನು ನಮೂದಿಸದೆ ಅಂಗೀಕರಿಸುವದಕ್ಕೂ ಅಥವಾ ನಿರಾಕರಿಸುವದಕ್ಕೂ ಇರುವ ಹಕ್ಕನ್ನ ಡೆಪ್ಯುಟಿ ಕಮಿಷನರವರು ತಾವೆ ಉಳಿಸಿಕೊಂಡು ಇರುತ್ತಾರೆ.

4. ದರಖಾಸ್ತು ಮಾಡಲು ಅಭಿಪ್ರಾಯವುಳ್ಳ ಜನಗಳು ಖುದ್ದಾಗಲಿ ಅಥವಾ ಅವರುಗಳಿಂದ ಕ್ರಮಪ್ರಕಾರ ಅಪ್ಪಣೆಯನ್ನು ಪಡೆದ ವಿಜಂಟ್ ಯಾ ಮುತಾಲೀಕರ ಮೂಲಕವಾಗಿಯಾಗಲಿ ಹಾಜರಾಗಬೇಕು. ಯಾವ ದರಖಾಸ್ತುದಾರನ್ನಾಗಲಿ (100) ಒಂದು ನೂರು ರೂಪಾಯಿಗಳನ್ನು ಜೇವಣಿ ಇಡದೆ ವಿನಹ ತನಿಗೋಸ್ಕರವಾಗಿ ಆಗಲಿ ಅಥವಾ ಇತರರಿಗೋಸ್ಕರವಾಗಿಯಾಗಲಿ ಸಾಮಿಲ್ ಮಾಡಲು ಆತನಿಗೆ ಅಪ್ಪಣೆ ಕೊಡಲ್ಪಡುವದಿಲ್ಲ. ಮಂಜೂರ್ಮಾಡಲ್ಪಟ್ಟ ದರಖಾಸ್ತುದಾರರಲ್ಲದ ಇತರ ದರಖಾಸ್ತುದಾರರಿಂದ ಹಾಜರಾದ ಮೊಲಗು ಹರಾಜು ಖೈದಾದೊಡನೆ ವಾಪಸ್ ಮಾಡಲ್ಪಡುವದು. ಆಖೈರ ಚಡ ದರಖಾಸ್ತುದಾರ್ರು ಹರಾಜು ಮಂಜೂರಾದ ಸಂಗತಿ ತಮಗೆ ತಿಳಿಸಿದ ಮೂರು ದಿವಸದೊಳಗೆ ತಾವು ಮೊದಲೇ ಇಟ್ಟಿದ್ದ ಡಿಪಾಜಿಟ್ ಮೊಬಲಗು ಸೇರಿಸಿ ಒಟ್ಟಾಗಿ ಹರಾಜು ಮೊಬಲಗಿನ ಕಾಲು ಹಿಸ್ಸೆ ಮೊಬಲಗನ್ನು ಬೆಂಗಳೂರು ಡಿಸ್ಟ್ರಿಕ್ಟು ಟ್ರೆಜರಿಗೆ ಪಾವತಿ ಮಾಡತಕ್ಕದ್ದು. ಹಾಗೆ ಮಾಡದೆ ತಪ್ಪಿದಲ್ಲಿ ಮೊದಲ್ ಇಟ್ಟಿದ್ದ ಜೇವಣಿ ಮೊಬಲಗನ್ನು ಸರ್ಕಾರಕ್ಕೆ ದಂಡವಾಗಿ ಸೇರಿಸಿಕೊಳ್ಳಲ್ಪಡುವದಲ್ಲದೆ ಹರಾಜು ಕ್ರಮ ನಡಿಸುವ ಆಫಿಸರರಿಂದ ಸದರೀ ಖಾಲಿ ಪುನಹ ಹರಾಜು ಮಾಡಲ್ಪಡುವದು.

5. ಮೇಲ್ಕಂಡಂತೆ ನಡಿಸಲ್ಪಡುವ ದುಸರಾ ಹರಾಜಿನಲ್ಲಿ ಉಂಟಾಗುವ ನಷ್ಟಕ್ಕೆ ಹಣ ಕೊಡಲು ತಪ್ಪಿದ ಅವಲ್ ಚಡದರ ಖಾಸ್ತುದಾರನು ಗುರಿಯಾಗತಕ್ಕದ್ದು. ದುಸರಾ ಹರಾಜಿನಲ್ಲಿ ಜಾಸ್ತಿ ಮೊಬಲಗು ಉಚ್ಚ್ವಸ್ಯಾದಲ್ಲಿ ಅಂಥಾ ಜಾಸ್ತಿ ಮೊಬಲಗಿಗೆ ಅವಲ್ ಚಡ ದರಖಾಸ್ತುದಾರನಿಗೆ ಯಾವ ಹಕ್ಕು ಇರುವದಿಲ್ಲ. ಆದರೆ ದುಸರಾ ರಾಜಿನಲ್ಲಿ [illegible] ಮೊಬಲಗು ಮೊದಲಿನ ಹರಾಜು ಮೊಬಲಗಿಗೆ ಕಮ್ಮಿಯಾದಲ್ಲಿ ಆರೀತಿ ಕಮ್ಮಿಯಾಗುವ ಮೊಬಲಗನ್ನು ಅವ[illegible]ದಾರನು ಪಾವತಿ ಮಾಡಲು ಬದ್ಧನಾಗಿರುತ್ತಾನೆ.

6. ಇಜಾರೆದಾರನು ಇದರಡಿ ನಮೂದಿರುವ ಷರತ್ತುಗಳಮೇರಿಗೆ ನಡಕೊಳ್ಳಲು ತಾನು ಬದ್ಧನಾಗಿರುತ್ತಾನಾಗಿ ಒಂದು ಮುಚ್ಚಳಿಕೆಯನ್ನು ಬರದು ರುಜು ಹಾಕಿ ಕೊಡತಕ್ಕದ್ದು. ಇಜಾರೆ ಮಂಜೂರಾದ ಸಂಗತಿ ಆತನಿಗೆ ತಿಳಿಸಿದ ಐದು ದಿವಸದೊಳಗಾಗಿ ಮುಚ್ಚಳಿಕೆಯನ್ನು ಆತನು ಬರದು ಕೊಡತಕ್ಕದ್ದು. ಇದಕ್ಕೆ ತಪ್ಪಿದಲ್ಲಿ ಠೇವಣಿ ಮೊಬಲಗು ದಂಡವಾಗಿ ಸೇರಿಸಿಕೊಳ್ಳುವದಲ್ಲದೆ ಬಾಬು ಪುನಹ ಹರಾಜು ಮಾಡಲ್ಪಡುವದು.

ಇಜಾರೆದಾರನು ಗುತ್ತಾ ಮೊಬಲಗಿನ ಬಾಕಿ ಮೊಬಲಗನ್ನು ಮತ್ತು ಪೂರಾ ಮೊಬಲಗಿನ ಮೇಲೆ ರೂಪಾಯಿಗೆ ಒಂದಾಣೆ ಮೇರಿಗೆ ಆಗುವ ಲೋಕಲ್ ಸೆಸ್ ಸಹ ಸಮವಾದ ಮೂರು ಖಿಸ್ತುಗಳಲ್ಲಿ ಈ ಕೆಳಗೆ ಕಾಣುವಂತೆ ಪಾವತಿ ಮಾಡತಕ್ಕದ್ದು. ಮೊದಲನೇ ಖಿಸ್ತು 1903ನೇ ಇಸವಿ ಅಕ್ಟೋಬರ್ 1ನೇ ತಾರೀಖು, 2ನೇ ಖಿಸ್ತು 1904ನೇ ಇಸವಿ ಜನವರಿ 1ನೇ ತಾರೀಖು, 3ನೇ ಖಿಸ್ತು 1904ನೇ ಇಸವಿ ಏಪ್ರೆಲ್ 1ನೇ ತಾರೀಖು ಯಾವದಾದರೂ ಒಂದು ಖಿಸ್ತು ಮೇಲೆ ಕಂಡಂತೆ ಪಾವತಿಯಾಗದೆ ತಪ್ಪಿದಲ್ಲಿ ಚಕ್ಕೆಗಳ ಜಮಾವಣಿ ಮತ್ತು ರಫ್ತು ಮಾಡುವದನ್ನು ನಿಲ್ಲಿಸಿಬಿಡಲ್ಪಡುತ್ತೆಯಲ್ಲದೆ ಇಜಾರೆ ಮೊಬಲಗಿನ ಬಾಕಿ ಮೊಬಲಗು ಯಾವತ್ತನ್ನು ರೆವಿನ್ಯೂ ಕಂದಾಯದಂತೆ ವಸೂಲ್ಮಾಡಿ ಇಜಾರೆಯನ್ನು ವಜಾ ಮಾಡಲ್ಪಡುವದು.

ಷರತ್ತುಗಳು.

(1) ಒಂದು ವರುಷಕ್ಕೆ ಬಳಪಟ್ಟ ಎಳೇಗಿಡ ಅಥವಾ ಕೊಂಬೆಯನ್ನು ಕಡಿಯಬಾರದು ಮತ್ತು ಚಕ್ಕೆ ತೆಗಿಯಬಾರದು.

(2) ಇಜಾರೆದಾರನ ನೌಕರರೇ ಆಗಲಿ ಅಥವಾ ಪಿಕ್ಕೆ ಕಂಟ್ರಾಕ್ಟುದಾರರೇ ಆಗಲಿ ಎಳೇ ಗಿಡಗಳನ್ನು ಕಡಿಯದಂತೆ ಕಂಟ್ರಾಕ್ಟುದಾರ ಜವಾಬ್ದಾರನಾಗಿರಬೇಕು.

(3) ಚಕ್ಕೆ ಜಮಾವಣಿ ಬಗ್ಯೆ ಬೇರೆ ಬೇರೆ ವಿಂಗಡಿಸುವ ಸರ್ಕಲ್‌ನಲ್ಲಿ ನೇಮಿಸಲ್ಪಡುವ ಇಜಾರೆದಾರನ ಮೇಸ್ತ್ರಿಗಳ ಮತ್ತು ಪಿಕಮಿ ಕಂಟ್ರಾಕ್ಟುದಾರುಗಳ ಹೆಸರಿನ ಮತ್ತು ಚಕ್ಕೆಯನ್ನು ರಫ್ತು ಮಾಡುವದಕ್ಕೆ ಮುಂಜೆ ದಾಸ್ತಾ ಮಾಡಿ ಇಡುವ ಜಾಗಾಗಳ ಬಂದು ಪಟ್ಟಿಯನ್ನು ಇಜಾರೆದಾರನು ಕೊಡತಕ್ಕದ್ದು.

(4) ತೊಗಟೆ ತೆಗದ ನಂತರ ವುಳಿಯುವ ಆ ಸಂಬಂಧವಾದ ವಿಸಿಷ್ಟ ಸಾಮಾನುಗಳು ಇಜಾರೆದಾರನಿಗೆ ಸೇದ್ದಾಗಿರುತ್ತೆ.

(5) ಸ್ಟೇಟ್ ಫಾರೆಸ್ಟ್ ಅಥವಾ ಪ್ಲಾಂಟೇಷನ್ನಲ್ಲಿ ಚಕ್ಕೆಯನ್ನು ಜಮಾಯಿಸಬೇಕಾದರೆ ಆವುಗಳ ಚಾರ್ಜಿನಲ್ಲಿರುವ ರೇಂಜ್ ಆಫಿಸರು ಮತ್ತು ಫಾರೆಸ್ಟರಿಂದ ಲಿಖಿತಮೂಲಕವಾದ ಅಪ್ಪಣೆ ಪಡೆಯದೆ ಪ್ರವೇಶ ಮಾಡಕೂಡದು.

(6) ಸೊಸಿ ಹಾಕಿ ಆಗಲಿ, ಅಭಿವೃದ್ಧಿಪಡಿಸುವದಕ್ಕಾಗಲಿ ಯಾ ಇತರ ಫಾರೆಸ್ಟ್ ಕೆಲಸಗಳು ನಡಿಸುವದಕ್ಕಾಗಿ ಬಹಿರಂಗವಾಗಿ ಬಂದ್ ಮಾಡಲ್ಪಟ್ಟಿರುವ ಸ್ಟೇಟ್ ಫಾರೆಸ್ಟ್ ಯಾ ಪ್ಲಾಂಟೇಷನ್‌ಗಳ ಭಾಗಗಳಲ್ಲಿ ಚಕ್ಕೆ ಜಮಾವಣಿ ಕೆಲಸ ನಡಿಸಕೂಡದು.

(7) ಇಜಾರೆ ಮೇರಿಗೆ ರಫ್ತು ಮಾಡಲ್ಪಡುವ ಚಕ್ಕೆಯ ಪ್ರಮಾಣ ವಗೈರೆ ತಪಸೀಲ್ ಕಾಣುವ ಲೆಕ್ಕಗಳನ್ನು ಇಜಾರೆದಾರನು ಇಡತಕ್ಕದ್ದು. ಅಂಥಾ ಲೆಕ್ಕವನ್ನು ಡೆಪ್ಯೂಟಿ ಕಮ್ಮಿಷನರಾಗಲಿ ಅಥವಾ ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರೇ ಆಗಲಿ ಅಥವಾ ಇವರುಗಳ ಪೈಕಿ ಯಾರಿಂದಲೇ ಆಗಲಿ ನೇಮಿಸಲ್ಪಡುವ ಇತರ ಆಫಿಸರೇ ಆಗಲಿ ತನಿಖೆಗೆ ಬಂದಾಗ ಅವರ ತನಿಖೆಗೆ ಹಾಜರ್ಮಾಡತಕ್ಕದ್ದು.

(8) ಸಾಗಿಸಿಕೊಂಡು ಹೋಗುವ ಪ್ರತಿ ಬಂದು ಗಾಡಿ ಬೋಜಾ ಚಕ್ಕೆಗೂ ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರವರಿಂದ ನಿಯಮಿಸಲ್ಪಡುವ ರೀತಿಯಲ್ಲಿ ಇಜಾರೆದಾರನು ಪಾಸ್ ಪಡಿಯತಕ್ಕದ್ದು.

(9) ಡಿಸ್ಟ್ರಿಕ್ಟಿನ ಕೋಣಿಗಳಲ್ಲಿ ಮತ್ತು ರೈಲ್ವೆ ಸ್ಟೇಷನ್‌ಗಳಲ್ಲಿ ದಾಸ್ತಾ ಮಾಡಿರುವ ಎಲ್ಲಾ ಚಕ್ಕೆಗಳನ್ನು 15—7—1904 ಒಳಗಾಗಿ ಡಿಸ್ಟ್ರಿಕ್ಟಿನ ಸರಹದ್ದಿನ ಹೊರಗೆ ರಫ್ತು ಮಾಡಿಕೊಳ್ಳತಕ್ಕದ್ದು.

(10) ಮೇಲೆ ನಮೂದಾಗುವ ಷರತ್ತುಗಳ ಪೈಕಿ ಯಾವದಾದರು ಒಂದು ಷರತ್ತಿಗೆ ಇಜಾರೆದಾರನು ತಪ್ಪಿ ನಡದಲ್ಲಿ ಇಜಾರೆ ಹಕ್ಕು ರದ್ದು ಮಾಡಲ್ಪಡುವದಲ್ಲದೆ ಅದುವರಿವಿಗೂ ಜಮಾಯಿಸಿ ಇರುವ ವಿಸಿಷ್ಟ ಚಕ್ಕೆಯನ್ನು ಸರ್ಕಾರಕ್ಕೆ ದಂಡವಾಗಿ ತೆಗದುಕೊಳ್ಳಲ್ಪಡುವದು. ಮತ್ತು ಇಜಾರೆದಾರನಿಂದ ಪಾವತಿ ಮಾಡಲ್ಪಟ್ಟಿರುವ ಪೂರಾ ಇಜಾರೆ ಮೊಬಲಗನ್ನೇ ಆಗಲಿ ಅಥವಾ ಆ ಪೈಕಿ ಡೆಪ್ಯೂಟಿ ಕಮ್ಮಿಷನರವರಿಂದ ತೀರ್ಮಾನಿಸಲ್ಪಡಬೇಕಾದ ಮೊಬಲಗನ್ನೇ ಆಗಲಿ ಸರ್ಕಾರಕ್ಕೆ ದಂಡವಾಗಿ ಸೇರಿಸಿಕೊಳ್ಳಲ್ಪಡುವದು.

ಟಿ. ಅಬ್ದುಲ್ ಕರೀಂ,
ಡೆಪ್ಯೂಟಿ ಕನ್ಸರ್ವೇಟರ್ ಆಫ್ ಫಾರೆಸ್ಟ್ಸ್, ಬೆಂಗಳೂರು ಡಿಸ್ಟ್ರಿಕ್ಟ್.